ಮಹಾಲಕ್ಷ್ಮೀ ಲೇಔಟ್ ಕ್ಷೇತ್ರದ ವ್ಯಾಪ್ತಿಯಲ್ಲಿ ಬಿ.ಡಿ.ಎ. ವತಿಯಿಂದ ನೀಡಿರುವ ಜಮೀನು

317 (698) ಶ್ರೀ ನರೇಂದ್ರಬಾಬು ನೆ.ಲ (ಮಹಾಲಕ್ಷ್ಮೀ ಲೇಔಟ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಾಲಕ್ಷ್ಮೀ ಲೇಔಟ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಸ್ವಂತ ಕಟ್ಟಡ ಕಟ್ಟಿಕೊಳ್ಳಲು ಜಮೀನು ನೀಡಿದ್ದು ಯಾವಾಗ (ವಿವರ ನೀಡುವುದು);

ಆ) ಈಗಾಗಲೇ ಶಿಕ್ಷಣ ಇಲಾಖೆಯಿಂದ ಎಷ್ಟು ಹಣ ಪಾವತಿ ಮಾಡಿದೆ; ನಿವೇಶನದಲ್ಲಿ ಸರ್ಕಾರಿ ಶಾಲೆ ಕಟ್ಟಡ ನಿರ್ಮಿಸಲು ಇಟ್ಟಿರುವ ಹಣವೆಷ್ಟು;

ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನೀಡಿರುವ ನಿವೇಶನದಲ್ಲಿ ಇನ್ನೂ ಕಟ್ಟಡ ನಿರ್ಮಿಸದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಸರ್ಕಾರಿ ಶಾಲೆ ಎಷ್ಟು ವರ್ಷದಿಂದ ಈ ಬಡಾವಣೆಯಲ್ಲಿದೆ ಮತ್ತು ಈ ಶಾಲೆಯಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು (ಶಾಲಾವಾರು ವಿವರ ನೀಡುವುದು)?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ ಸಂಖ್ಯೆ 162 ದಿನಾಂಕ: 03–07–2007 ರಲ್ಲಿ ಹಂಚಿಕೆಯಾಗಿರುತ್ತದೆ.

ಆ) ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ರೂ. 18,25.236–00 ಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪಾವತಿಸಲಾಗಿದೆ.

ನಿವೇಶನದಲ್ಲಿ ಸರ್ಕಾರಿ ಶಾಲೆಗೆ 5 ಕೊಠಡಿಗಳನ್ನು ನಿರ್ಮಿಸಲು ಎಸ್.ಎಸ್.ಎ ವತಿಯಿಂದ 2008–09ನೇ ಸಾಲಿನಲ್ಲಿ ರೂ. 27.7 ಲಕ್ಷಗಳನ್ನು ಕಾಯ್ದಿರಿಸಲಾಗಿದೆ.

ಇ) ಬಂದಿದೆ.

ಈ) ಈ ಬಡಾವಣೆಯಲ್ಲಿ 1972 ರಿಂದ ಶಾಲೆಯಿರುತ್ತದೆ. ಶಾಲೆಯಲ್ಲಿ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ–188 ತರಗತಿವಾರು ವಿವರ ಕೆಳಗಿನಂತಿದೆ.

ತರಗತಿ	0	1	2	3	4	5	6	7	ಒಟ್ಟು
	20	17	19	25	26	29	24	28	**188**

ರಾಜ್ಯದಲ್ಲಿ ಮದ್ಯದಂಗಡಿಗಳು ಹಾಗೂ ಬಾರ್‌ಗಳ ಬಗ್ಗೆ ಮಾಹಿತಿ ಒದಗಿಸುವುದು.

319 (700) ಶ್ರೀ ನರೇಂದ್ರಬಾಬು ನೆ.ಲ. (ಮಹಾಲಕ್ಷ್ಮಿ ಲೇಔಟ್) : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮದ್ಯದಂಗಡಿಗಳು ಹಾಗೂ ಬಾರ್‌ಗಳು ಎಷ್ಟು ಇವೆ (ಜಿಲ್ಲಾವಾರು ಮಾಹಿತಿ ಒದಗಿಸುವುದು);

ಆ) ಇವುಗಳಲ್ಲಿ ಎಷ್ಟು ಮಹಿಳೆಯರು ಕೆಲಸ ಮಾಡುತ್ತಿದ್ದಾರೆ;

ಇ) ಮದ್ಯದಂಗಡಿ ಹಾಗೂ ಬಾರ್ ಅಂಡ್ ರೆಸ್ಟೋರೆಂಟ್‌ಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು (ವಿವರವಾದ ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು);

ಈ) ಇವರುಗಳಿಗೆ ಪ್ರತಿ ವರ್ಷ ವಿಧಿಸುವ ಶುಲ್ಕವೆಷ್ಟು, ಸಾರ್ವಜನಿಕರಿಗೆ ಪ್ರವೇಶಕ್ಕೆ ನಿಗದಿಪಡಿಸಿರುವ ಸಮಯವೇನು?

ಉ) ಕಳೆದ ಮೂರು ವರ್ಷಗಳಿಂದ ಲೈಸನ್ಸ್ ನೀಡಿರುವ ಮದ್ಯದಂಗಡಿ ಬಾರ್ ಅಂಡ್ ರೆಸ್ಟೋರೆಂಟ್‌ಗಳು ಎಷ್ಟು (ಜಿಲ್ಲಾವಾರ ಹಾಗೂ ವರ್ಷವಾರು ವಿವರ ನೀಡುವುದು);

ಊ) ಮದ್ಯದಂಗಡಿಗಳಲ್ಲಿ ನಕಲಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ತಡೆಗಟ್ಟುವ ಕ್ರಮವೇನು;

ಋ) ಬೆಂಗಳೂರು ನಗರದಲ್ಲಿರುವ ಅನಧಿಕೃತ ಮದ್ಯ ದಂಗಡಿಗೆ ಹೊಂದಿಕೊಂಡಂತೆ ಇರುವ ಆಹಾರ ಪದಾರ್ಥಗಳ ಅಂಗಡಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಜರುಗಿಸಲಾದ ಕ್ರಮವೇನು; ಎಷ್ಟು ಪ್ರಕರಣಗಳು ದಾಖಲಾಗಿದೆ?